ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.

ಕ್ರಿ.ಮೊ. ಸಂಖ್ಯೆ **2200/2022**

ಪಿರ್ಯಾದಿ ಃ ರಾಜ್ಯದ ಪರವಾಗಿ ಲಕ್ಕವಳ್ಳಿ ಪೊಲೀಸರು

-ವಿರುದ್ಧ-

ಆರೋಪಿ/ತರುಃ ಅಶೋಕ.ಪಿ. ಬಿನ್ ಪರಶುರಾಮ

****

ಆ ರೋ ಪ ಣೆ

ದಿನಾಂಕ 16.05.2022 ರಂದು ಸಂಜೆ 05.45 ಗಂಟೆ ಸಮಯದಲ್ಲಿ ಲಕ್ಕವಳ್ಳಿ ಪೋಲೀಸ್ ಠಾಣಾ ಸರಹದ್ದಿನ ರಂಗೇನಹಳ್ಳಿ ಗ್ರಾಮದಲ್ಲಿ ಚಾಸಾ-1 ಮಹೇಂದ್ರರವರ ತಾಯಿಯಾದ ಪಾರ್ವತಮ್ಮರವರು ರಂಗೇನಹಳ್ಳಿ ಗ್ರಾಮದ ಬಳಿ ಹಾದು ಹೋಗಿರುವ ಲಕ್ಕವಳ್ಳಿ ರಸ್ತೆಯನ್ನು ದಾಟುತ್ತಿರುವಾಗ, ಆರೋಪಿಯಾದ ನೀವು ಬೈಕ್ ಸಂಖ್ಯೆ ಕೆಎಃ04/ಈಯು-3503 ನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಪಾರ್ವತಮ್ಮರವರಿಗೆ ಡಿಕ್ಕಿ ಹೊಡೆಸಿ ಅಪಘಾತ ಪಡಿಸಿದ್ದು, ಆದ್ದರಿಂದ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 279 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಅದೇ ದಿನ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಬೈಕ್ ಸಂಖ್ಯೆ ಕೆಎಃ04/ಈಯು-3503 ನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಮಾನವ ಪ್ರಾಣಕ್ಕೆ ಅಪಾಯವಾಗುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಪಾರ್ವತಮ್ಮರವರಿಗೆ ಡಿಕ್ಕಿ ಹೊಡೆಸಿ ಅಪಘಾತ ಪಡಿಸಿದ ಪರಿಣಾಮ ಪಾರ್ವತಮ್ಮರವರು ರಸ್ತೆಯ ಮೇಲೆ ಬಿದ್ದು ಅವರ ತಲೆಗೆ ಕೈಕಾಲುಗಳಿಗೆ ಪೆಟ್ಟು ಬಿದ್ದು ತೀವ್ರ ಸ್ವರೂಪದ ರಕ್ತ ಗಾಯಗಳಾಗಿದ್ದು, ಚಿಕಿತ್ಸೆ ಫಲಕಾರಿಯಾಗದೇ ದಿನಾಂಕ 23.05.2022 ರಂದು ರಾತ್ರಿ 08.10 ಗಂಟೆ ಸಮಯದಲ್ಲಿ ಮೃತಪಟ್ಟಿದ್ದು, ಆದ್ದರಿಂದ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ 304(ಎ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

ಪ್ರಶ್ನೆ 1) ಈಗ ಓದಿ ಹೇಳಲಾದ ಆರೋಪಣೆಯನ್ನು ಕೇಳಿ ತಿಳಿದುಕೊಂಡಿರಾ?
ಉತ್ತರಃ- ಕೇಳಿದ್ದೇನೆ

ಪ್ರಶ್ನೆ 2) ನೀವು ಆರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೆ?
ಉತ್ತರಃ- ವಿಚಾರಣೆಯಾಗಬೇಕು

(ಮೇಲ್ಕಂಡ ಆಪಾದನೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ, ಕೇಳಿದ ನಂತರ ಆರೋಪಿ ಕೊಟ್ಟ ಉತ್ತರವನ್ನು ನಾನೇ ಯಥಾವತ್ತಾಗಿ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆಯೆಂದು ದೃಢೀಕರಿಸುತ್ತೇನೆ.)

ದಿನಾಂಕಃ 26.05.2025

ಸಹಿ
**(ಊರ್ಮಿಳ.ವಿ.)**
ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ತರೀಕೆರೆ.